ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ (ನಗರ ಸ್ಥಳೀಯ ಸಂಸ್ಥೆ)

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 30/05/2019

# ಸ್ಥಳೀಯ ಸಂಸ್ಥೆ ಚುನಾವಣೆ ಶೇಕಡಾ 72ರಷ್ಟು ಮತದಾನ

## 4360 ಅಭ್ಯರ್ಥಿಗಳ ಭವಿಷ್ಯ ನಾಳೆ ಪ್ರಕಟ

• **ಕನ್ನಡಪ್ರಭ ವಾರ್ತೆ ಬೆಂಗಳೂರು** 30/5/19

'ಮಿನಿ ಸಮರ' ಎಂದೇ ಪರಿಗಣಿಸಲ್ಪಟ್ಟಿರುವ, ರಾಜ್ಯದ 61 ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯ ಮತದಾನವು ಬುಧವಾರ ಶಾಂತಿಯುತವಾಗಿ ನಡೆದಿದ್ದು, ಶೇ.72ರಷ್ಟು ಮತದಾನವಾಗಿದೆ ಎಂದು ರಾಜ್ಯ ಚುನಾವಣಾ ಆಯೋಗವು ಮಾಹಿತಿ ನೀಡಿದೆ.



8 ನಗರಸಭೆಗಳು, 33 ಪುರಸಭೆಗಳು ಮತ್ತು 22 ಪಟ್ಟಣ ಪಂಚಾಯಿತಿಗಳಿಗೆ ಚುನಾವಣೆ ನಡೆಯಿತು. ಒಟ್ಟು 1296 ವಾರ್ಡ್‌ಗಳಲ್ಲಿ 4360 ಅಭ್ಯರ್ಥಿಗಳ ಭವಿಷ್ಯವನ್ನು ಮತದಾರರು ಬರೆದಿದ್ದಾರೆ. 61 ಸ್ಥಳೀಯ ಸಂಸ್ಥೆಗಳ 1326 ವಾರ್ಡ್‌ಗಳ ಪೈಕಿ 30 ವಾರ್ಡ್‌ಗಳಲ್ಲಿ ಈಗಾಗಲೇ ಅವಿರೋಧವಾಗಿ ಆಯ್ಕೆಯಾಗಿದೆ. ಹೀಗಾಗಿ 1296 ವಾರ್ಡ್‌ಗಳಲ್ಲಿ ಮತದಾನ ನಡೆಯಿತು. ಕಾಂಗ್ರೆಸ್‌ನಿಂದ 1224, ಬಿಜೆಪಿಯಿಂದ 1125, ಜೆಡಿಎಸ್‌ನಿಂದ 780 ಅಭ್ಯರ್ಥಿಗಳು ಸೇರಿದಂತೆ 4360 ಅಭ್ಯರ್ಥಿಗಳ ಅದೃಷ್ಟ ಮತಪೆಟ್ಟಿಗೆಯಲ್ಲಿ ಸೇರಿದೆ.

ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇರುವ ನಗರ ಸ್ಥಳೀಯ ಸಂಸ್ಥೆಗಳನ್ನು ಹೊರತುಪಡಿಸಿ 63 ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಲು ಆಯೋಗವು ವೇಳಾಪಟ್ಟಿಯನ್ನು ಪ್ರಕಟಿಸಿತ್ತು. ಆದರೆ, ಈ ಪೈಕಿ ಸೊರಬ ಮತ್ತು ನೆಲಮಂಗಲ ಸ್ಥಳೀಯ ಸಂಸ್ಥೆ ಚುನಾವಣೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದ್ದರಿಂದ ಬುಧವಾರ 61 ಸ್ಥಳೀಯ ಸಂಸ್ಥೆಗಳಿಗೆ ಮತದಾನ ನಡೆದಿದೆ. ಇದೀಗ ಸೊರಬ ಮತ್ತು ನೆಲಮಂಗಲ ಸ್ಥಳೀಯ ಸಂಸ್ಥೆಗಳಿಗೆ ನೀಡಲಾಗಿದ್ದ ತಡೆಯಾಜ್ಞೆ ತೆರವುಗೊಂಡಿರುವ ಕಾರಣ ಜೂ.1ಕ್ಕೆ ಚುನಾವಣೆ ನಡೆಯಲಿದೆ ಎಂದು ಆಯೋಗದ ಅಧಿಕಾರಿಗಳು ತಿಳಿಸಿದ್ದಾರೆ.

ಸಣ್ಣಪುಟ್ಟ ಗೊಂದಲಗಳನ್ನು ಬಿಟ್ಟರೆ 61 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬಿಗಿ ಭದ್ರತೆಯೊಂದಿಗೆ ಶಾಂತಿಯುತವಾಗಿ ಮತದಾನ ನಡೆದಿದೆ. ಶುಕ್ರವಾರ ಮತ ಎಣಿಕೆ ನಡೆಯಲಿದ್ದು, ಫಲಿತಾಂಶ ಹೊರಬೀಳಲಿದೆ. ಇದೇ ವೇಳೆ ಆನೇಕಲ್‌ನಲ್ಲಿ ಕೇಳಿದ ಜಾಗಕ್ಕೆ ಮತಗಟ್ಟೆ ನೀಡಲಿಲ್ಲ ಎಂಬ ಕಾರಣಕ್ಕಾಗಿ ಕೆಲ ಸಮಯ ಮತದಾನ ಪ್ರಾರಂಭವಾಗಲಿಲ್ಲ.

ಮತಗಟ್ಟೆ ಬದಲಾವಣೆಗೆ ಕೊನೆ ಕ್ಷಣದಲ್ಲಿ ಪ್ರಸ್ತಾವನೆ ಕಳುಹಿಸಿದರು. ಆದರೆ, ಆಗ ಮತಗಟ್ಟೆ ಬದಲಾವಣೆ ಮಾಡಿದರೆ ಗೊಂದಲವಾಗಲಿದೆ ಎಂಬ ಕಾರಣಕ್ಕಾಗಿ ಅಂಗೀಕರಿಸಲಿಲ್ಲ. ಇದರ ಬಗ್ಗೆ ಅಸಮಾಧಾನ ಉಂಟಾಗಿ ಮತದಾನ ಪ್ರಕ್ರಿಯೆ ತಡವಾಗಿ ನಡೆದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.